# 25-01-2025






ದೇಶದ ರಾಜಕೀಯ ಪ್ರಕ್ರಿಯೆಯಲ್ಲಿ ಹಾಗೂ ಚುನಾವಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಪ್ರೇರೇಪಣೆ ಮಾಡುವುದು ಚುನಾವಣಾ ಆಯೋಗದ ಮುಖ್ಯ ಉದ್ದೇಶ ಎಂದು ಡಾ.ಎಸ್.ಮರೀಗೌಡವರು ಅಭಿಪ್ರಾಯಪಟ್ಟರು.

ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ:25.01.2025ರ ಶನಿವಾರ ಐ.ಕ್ಯೂ.ಎ.ಸಿ ಘಟಕ, ರಾಜ್ಯಶಾಸ್ತ್ರ ವಿಭಾಗ, ಚುನಾವಣಾ ಸಾಕ್ಷರತಾ ಕ್ಲಬ್ ಹಾಗೂ ರಾಷ್ಟ್ರೀಯ ಸೇವಾ ಯೋಜನಾ ಘಟಕಗಳ ಸಹಯೋಗದೊಂದಿಗೆ ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಮತದಾನ ಮಾಡುವೆ ಎಂಬ ಧ್ಯೇಯ ವಾಖ್ಯದೊಂದಿಗೆ ಆಯೋಜಿಸಿದ್ದ “ರಾಷ್ಟ್ರೀಯ ಮತದಾರ ದಿನಾಚರಣೆ”ಯಲ್ಲಿ ಮುಖ್ಯಭಾಷಣಕಾರರಾಗಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಮುಂದುವರೆದು, ಭಾರತದಲ್ಲಿ 18ವರ್ಷ ತುಂಬಿದ ಯುವ ಸಮುದಾಯವನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಮಾಡಿಕೊಳ್ಳಲು ಜಾಗೃತಿಯನ್ನು ಮೂಡಿಸುವ ಸಲುವಾಗಿ ಚುನಾವಣಾ ಆಯೋಗದ ಸಂಸ್ಥಾಪನಾ ದಿನವಾದ ಜನವರಿ 25ಅನ್ನು 2011ರಿಂದ ರಾಷ್ಟ್ರೀಯ ಮತದಾರರ ದಿನಾಚಾರಣೆಯನ್ನಾಗಿ ಆಚರಿಸಿಕೊಂಡು ಬರಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸ್ನಾತಕೋತ್ತರ ಎಂ.ಕಾಂ ವಿಭಾಗದ ಮುಖ್ಯಸ್ಥರಾದ ಡಾ.ಎಸ್.ಪೂರ್ಣಿಮ, ರಾ.ಸೇ.ಯೋ ಕಾರ್ಯಕ್ರಮಾಧಿಕಾರಿ ಪ್ರೊ.ಸಿದ್ಧರಾಜು.ಎಸ್, ಚುನಾವಣಾ ಸಾಕ್ಷರತಾ ಕ್ಲಬ್‌ನ ಸಂಯೋಜಕರಾದ ಡಾ.ರಘು.ಬಿ.ಟಿ, ಅಧ್ಯಾಪಕ ಸಲಹೆಗಾರರಾದ ಡಾ.ಪಿ.ಕೆ.ಗೋವರ್ಧನ್, ಎನ್.ಸಿ.ಸಿ ಅಧಿಕಾರಿಗಳಾದ ಡಾ.ಬಿ.ಎಸ್.ಶ್ರೀಹರ್ಷ, ರಾ.ಸೇ.ಯೋ ಸ್ವಯಂ ಸೇವಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.



























